# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 899 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23-02-2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಎನ್.ಪಿ.ಎಸ್ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಮರಣ ಪರಿಹಾರ ಮತ್ತು ನಿವೃತ್ತಿ ಪಿಂಚಣಿಗಾಗಿ ಸಲ್ಲಿಸಿರುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಎನ್.ಪಿ.ಎಸ್ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಮರಣ ಪರಿಹಾರ ನಿವೃತ್ತಿ ಅರ್ಜಿಗಳನ್ನು ಮಂಜೂರಾತಿ ಪ್ರಕ್ರಿಯೇ ನಡೆಸಲು ಜಿಲ್ಲಾ ಹಂತಕ್ಕೆ ಅನುಮತಿ ನೀಡಲಾಗಿದೆ. ಸದರಿ ಜಿಲ್ಲಾ ವ್ಯಾಪ್ತಿಯಲ್ಲಿ 2021-22ನೇ ಸಾಲಿನಿಂದ 2022-23ನೇ ಸಾಲಿನವರೆಗೆ ನಿವೃತ್ತಿ ಪಿಂಚಣಿಗಾಗಿ ಒಟ್ಟು 86 ಅರ್ಜಿಗಳು ಮತ್ತು ಮರಣ ಪರಿಹಾರಕ್ಕಾಗಿ ಒಟ್ಟು 8 ಅರ್ಜಿಗಳು ಬಾಕಿ ಇರುತ್ತವೆ. |
| ಆ. | ಚಿಕ್ಕಮಗಳೂರು ಜಿಲ್ಲೆ ಶೃಂಗೇರಿ ತಾಲ್ಲೂಕಿನ ನಿವೃತ್ತಿ ಹೊಂದಿದ ಹಾಗೂ ಮರಣ ಹೊಂದಿದ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಎನ್.ಪಿ.ಎಸ್ ಪಿಂಚಣಿ ಮೊತ್ತ ಪಾವತಿಸದ ಬಗ್ಗೆ ಉಪನಿರ್ದೇಶಕರು ಹಾಗೂ ಇತರೆ ಸಹಾಯಕರು ಸರಿಯಾದ ಪ್ರತಿಕ್ರಿಯೆ ನೀಡದೆ ಇರುವುದರಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಲ್ಲದಿದ್ದಲ್ಲಿ, ಈ ಅಧಿಕಾರಿಗಳು ಸಾರ್ವಜನಿಕರಿಗೆ ಪ್ರತಿಕ್ರಿಯಿಸುವ ಸಂಬಂಧ ಕಳೆದ 3 ವರ್ಷಗಳಿಂದ ಇಲ್ಲಿಯವರೆಗೂ ಬಂದಿರುವ ದೂರಗಳೆಷ್ಟು; (ಸಂಪೂರ್ಣವಾದ ಮಾಹಿತಿ ನೀಡುವುದು) | ಚಿಕ್ಕಮಗಳೂರು ಜಿಲ್ಲೆ ವ್ಯಾಪ್ತಿಗೆ ಬರುವ ಶೃಂಗೇರಿ ತಾಲ್ಲೂಕಿನಲ್ಲಿ ಇರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಹಾಗೂ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಮರಣ ಪರಿಹಾರ ಮತ್ತು ಎನ್.ಪಿ.ಎಸ್ ಯೋಜನೆಗೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಉಪ ನಿರ್ದೇಶಕರ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ ಮತ್ತು ಈ ಕುರಿತು ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಇ. | ಕಳೆದ 3 ವರ್ಷಗಳಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಫಲಾನುಭವಿಗಳಿಗೆ ಮತ್ತು ಸಾರ್ವಜನಿಕರಿಗೆ ಸರಿಯಾದ ರೀತಿಯಲ್ಲಿ ಪ್ರತಿಕ್ರಿಯೆ ನೀಡದಿರುವುದರ ಬಗ್ಗೆ ಇಲಾಖೆಗೆ ಸಾರ್ವಜನಿಕರು ದೂರು ನೀಡಿದ್ದು, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು) | ಕಳೆದ 3 ವರ್ಷಗಳಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಫಲಾನುಭವಿಗಳಿಗೆ ಮತ್ತು ಸಾರ್ವಜನಿಕರಿಗೆ ಉತ್ತಮವಾಗಿ ಸ್ಪಂದಿಸುತ್ತಿದ್ದು ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಸದರಿಯವರುಗಳ ವಿರುದ್ಧ ಯಾವುದೇ ಕ್ರಮ ಜರುಗಿಸಿರುವುದಿಲ್ಲ. |

**ಸಂಖ್ಯೆ: ಮಮಇ 50 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.